(7). <u>ವಯೋಮಿತಿ (ಜೈಲರ್ ಹಾಗೂ ವಾರ್ಡರ್ ಹುದ್ದೆಗೆ)</u> :-

**7.1) ಸಾಮಾನ್ಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ:**

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ **09.03.2019ಕ್ಕೆ** ಅಭ್ಯರ್ಥಿಗೆ ಕನಿಷ್ಟ **20** ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 28 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ 26 ವರ್ಷಗಳು.

**7.2) ಮಾಜಿ ಸೈನಿಕ ಅಭ್ಯರ್ಥಿಗಳಿಗೆ :**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ 03 ವರ್ಷಗಳು" ಸಡಲಿಕೆ ಮಾಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

**7.3) ಮಾಜಿ ಸೈನಿಕರ ಬಗ್ಗೆ ವಿವರಣೆ:**

ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್ (Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ (General Reserved Engineering Force), ಲೋಕ್ ಸಹಾಯಕ್ ಸೇನಾ (Lok Sahayak Sena) ಮತ್ತು ಪ್ಯಾರಾ ಮಿಲಿಟರಿದಳ (Para Military Forces) ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

**ಅಥವಾ**

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.
4. ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರ ಸೇನೆಯಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರ ಸೇನೆಯ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ:** ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.

(ಉ) ಈ ಆಯ್ಕೆ ನೇಮಕಾತಿಯು ಕರ್ನಾಟಕ ಕಾರಾಗೃಹಗಳ ಸೇವೆಗಳು (ನೇಮಕಾತಿ) ನಿಯಮಗಳು 2002, ಮತ್ತು ಅದರ ತಿದ್ದುಪಡಿ ನಿಯಮ – 2007, 2010 ಹಾಗೂ ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗೂ ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ ಆದೇಶಗಳ ಅನುಸಾರ ಮತ್ತು ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಮೇರೆಗೆ ಆಯಾ ಹುದ್ದೆಗೆ ಅನುಗುಣವಾಗಿ ಅನುಸರಿಸಲಾಗುವುದು.